ತಿಪಟೂರು ಉಪವಿಭಾಗದಲ್ಲಿ ಸಾರಿಗೆ ಸಹಾಯಕ ಪ್ರಾದೇಶಿಕ ಕಛೇರಿ ಪ್ರಾರಂಭ.

1674 - ಶ್ರೀ ಜೆ.ಸಿ. ಮಾಧುಸ್ವಾಮಿ (ಚಿಕ್ಕನಾಯಕನಹಳ್ಳಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *ತಿಪಟೂರು ಉಪ ವಿಭಾಗದಲ್ಲಿ ಮೂರು ತಾಲ್ಲೂಕುಗಳನ್ನೊಳಗೊಂಡಂತೆ ಒಂದು ಸಾರಿಗೆ ಸಹಾಯಕ ಪ್ರಾದೇಶಿಕ ಕಛೇರಿಯನ್ನು ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ?*

2. *ಹಾಗಿದ್ದಲ್ಲಿ ಸದರೀ ಕಛೇರಿಯನ್ನು ತಿಪಟೂರಿನಲ್ಲಿ ಆರಂಭಿಸಲು ಸರ್ಕಾರದವರು ಕೈಗೊಂಡಿರುವ ಕ್ರಮವೇನು?*

ಶ್ರೀ ಪಿ.ಜಿ.ಆರ್. ಸಿಂಧ್ಯ (ಸಾರಿಗೆ ಸಚಿವರು) :

1. ಹೌದು.

2. ಸರ್ಕಾರದ ಪರಿಶೀಲನೆಯಲ್ಲಿದೆ.

ಬೈಲಹೊಂಗಲ ತಾಲ್ಲೂಕಿನಲ್ಲಿ ಹೆಚ್ಚಿನ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸುವ ಬಗ್ಗೆ

1675 - ಶ್ರೀ ಮಹಂತೇಶ್ ಎಸ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನಲ್ಲಿ ಅಂಗನವಾಡಿ ಕೇಂದ್ರಗಳು ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

2. *ಹಾಗಿದ್ದಲ್ಲಿ ಹೆಚ್ಚಿನ ಅಂಗನವಾಡಿ ಕೇಂದ್ರಗಳನ್ನು ತೆರೆಯಲು ಸರ್ಕಾರದವರು ಪರಿಶೀಲಿಸುವರೇ?*

ಶ್ರೀಮತಿ ವಿಮಲಾಬಾಯಿ ಜಗದೇವ್‌ರಾವ್ ದೇಶ್‌ಮುಖ್ (ಮಹಿಳಾ ಹಾಗೂ ಮಕ್ಕಳ ಅಭಿವೃದ್ಧಿ ರಾಜ್ಯ ಸಚಿವರು) :

1. ಹೌದು.

2. ಸಮಗ್ರ ಬಾಲವಿಕಾಸ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿ -ರುವುದರಿಂದ, ಬೈಲಹೊಂಗಲ ತಾಲ್ಲೂಕಿಗೆ 52 ಹೆಚ್ಚುವರಿ ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿರುತ್ತದೆ. ಆದರೆ, ಬೈಲಹೊಂಗಲ ತಾಲ್ಲೂಕಿಗೆ ಹೆಚ್ಚುವರಿ ಅಂಗನವಾಡಿ ಕೇಂದ್ರಗಳ ಮಂಜೂರಾತಿ ಪ್ರಸ್ತಾವನೆಗೆ ಕೇಂದ್ರ ಸರ್ಕಾರವು ಅನುಮೋದನೆ ನೀಡಿರುವುದಿಲ್ಲ.